ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಟೆಂಡರ್ ಪ್ರಕ್ರಿಯೆ ನಡೆಸಲಾಗಿದೆ. ಇದೇ ರೀತಿ ರಾಜ್ಯ ಹೆದ್ದಾರಿಗಳಿಗೂ ಸಹ ಕಾರ್ಯಕ್ರಮವನ್ನು ರೂಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

580(778) : ಶ್ರೀ ಕ್ಯಾತ್‌ಸಂದ್ರ ಎನ್. ರಾಜಣ್ಣ (ಬೆಳ್ಳಾವಿ) ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಮತ್ತು ಬೆಂಗಳೂರು ನಡುವೆ ಅನಧಿಕೃತವಾಗಿ ಎಷ್ಟು ಖಾಸಗಿ ವಾಹನಗಳು ಪ್ರಯಾಣಿಕರನ್ನು ಪ್ರತಿ ದಿನ ಸಾಗಿಸುತ್ತಿವೆ; (ವಾಹನಗಳ ದರ್ಜೆವಾರು ಮಾಹಿತಿ ಒದಗಿಸುವುದು);

ಆ) ಖಾಸಗಿ ವಾಹನದವರು ಅನಧಿಕೃತವಾಗಿ ಪ್ರಯಾಣಿಕರನ್ನು ಸಾಗಿಸುತ್ತಿದ್ದುದ್ದರಿಂದ ಪ್ರತಿ ತಿಂಗಳು ಸರ್ಕಾರಕ್ಕೆ ಆಗುತ್ತಿರುವ ಆರ್ಥಿಕ ನಷ್ಟ ಎಷ್ಟು;

ಇ) ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಸರ್ಕಾರಿ ಬಸ್‌ಗಳನ್ನು ಓಡಿಸದಿರುವುದಕ್ಕೆ ಕಾರಣಗಳೇನು;

ಈ) ಪ್ರಯಾಣಿಕರನ್ನು ಅನಧಿಕೃತವಾಗಿ ಸಾಗಿಸುತ್ತಿರುವ ಖಾಸಗಿ ವಾಹನ ಮಾಲೀಕರ ವಿರುದ್ಧ ಕಳೆದ 3 ವರ್ಷಗಳಲ್ಲಿ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ತುಮಕೂರು-ಬೆಂಗಳೂರು ನಡುವೆ 42 ಒಪ್ಪಂದ ಕರಾರು ವಾಹನಗಳು ಅಧಿಕೃತವಾಗಿ ರಹದಾರಿ ಪಡೆದು ಸಂಚರಿಸುತ್ತಿವೆ, ರಹದಾರಿ ಪಡೆಯದೇ ಅನಧಿಕೃತವಾಗಿ ಸಂಚರಿಸುತ್ತಿರುವ ವಾಹನಗಳನ್ನು ತಪಾಸಿಸಿ, ಅವುಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ತುಮಕೂರಿನಿಂದ ಬೆಂಗಳೂರು ಹಾಗೂ ಬೆಂಗಳೂರಿನಿಂದ ತುಮಕೂರಿನವರೆಗೆ 418 ಟ್ರಿಪ್‌ಗಳನ್ನು ಆಚರಣೆ ಮಾಡುತ್ತಿದೆ. ಸದರಿ ಸಾರಿಗೆಗಳು ಸದ್ಯದ ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿರುತ್ತದೆ.

ಈ) 1,747 ಮಜಲು ವಾಹನಗಳು ಮತ್ತು 1,061 ಮ್ಯಾಕ್ಸಿಕ್ಯಾಬ್‌ಗಳನ್ನು ತಪಾಸಣೆ ಮಾಡಲಾಗಿದ್ದು, ಈ ಪೈಕಿ 533 ಮಜಲು ವಾಹನಗಳು ಮತ್ತು 1061 ಮ್ಯಾಕ್ಸಿಕ್ಯಾಬ್‌ಗಳನ್ನು ವಿರುದ್ಧ ಪ್ರಕರಣವನ್ನು ದಾಖಲಿಸಿ ಮೋಟಾರು ವಾಹನ ಕಾಯ್ದೆ 1988ರ ಅಡಿ 200ರಡಿಯಲ್ಲಿ ರೂ.29,25,397/-ಗಳ ದಂಡ ವಸೂಲಿ ಮಾಡಲಾಗಿದೆ.